


ಕರ್ನಾಟಕ ವಿಧಾನ ಮಂಡಲ




ದಿನಾಂಕ:12-12-2023 ರಂದು ಕರ್ನಾಟಕ ವಿಧಾನ ಮಂಡಲ ವತಿಯಿಂದ ಸುವರ್ಣ ಕರ್ನಾಟಕ ಸಂಭ್ರಮಾಚರಣೆಯ ಸವಿನೆನಪಿನಲ್ಲಿ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ, ವಿಧಾನಮಂಡಲದ ಮಾಜಿ ಸಭಾಧ್ಯಕ್ಷರು ಹಾಗೂ ಮಾಜಿ ಸಭಾಪತಿಗಳಿಗೆ ಸನ್ಮಾನ ಸಮಾರಂಭದಲ್ಲಿ ಘನತೆವೆತ್ತ ರಾಜ್ಯಪಾಲರಾದ ಸನ್ಮಾನ್ಯ ಶ್ರೀ ಥಾವರ್‌ಚಂದ್ ಗೆಹ್ಲೋಟ್ ಅವರು ಉದ್ಘಾಟನೆ ಮಾಡಿದರು. ಮಾನ್ಯ ಸಭಾಪತಿಗಳಾದ ಶ್ರೀ ಬಸವರಾಜ ಎಸ್ ಹೊರಟ್ಟಿ, ಮಾನ್ಯ ಮುಖ್ಯಮಂತ್ರಿಗಳು, ಮಾನ್ಯ ಉಪಮುಖ್ಯಮಂತ್ರಿಗಳು, ಮಾನ್ಯ ವಿಧಾನ ಸಭಾಧ್ಯಕ್ಷರಾದ ಶ್ರೀ ಯು.ಟಿ.ಖಾದರ್, ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳ ಸಚಿವರಾದ ಶ್ರೀ ಎಚ್.ಕೆ ಪಾಟೀಲ ಹಾಗೂ ಇತರ ಶಾಸಕರು ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಮಾಜಿ ವಿಧಾನ ಸಭಾಧ್ಯಕ್ಷರಾದ ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಹಾಗೂ ಮಾಜಿ ಸಭಾಪತಿಗಳು ಸನ್ಮಾನ ಸ್ವೀಕರಿಸಿದರು.